# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 177 |
| ಸದಸ್ಯರ ಹೆಸರು | : | ಶ್ರೀ ಎಂ ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 12-08-2025 |
| ಉತ್ತರಿಸುವ ಸಚಿವರು | : | ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಇತ್ತೀಚಿನ ದಿನಗಳಲ್ಲಿ ರಾಜ್ಯದ ಸುಮಾರು 11 ಮಹಾನಗರ ಪಾಲಿಕೆ/ ನಗರಸಭೆಗಳು ಆರ್ಥಿಕ ಸಾಮರ್ಥ್ಯ ಮೀರಿದ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಂಡಿರುವುದರಿಂದ ತೀವ್ರ ಆರ್ಥಿಕ ಒತ್ತಡಕ್ಕೆ ಒಳಪಟ್ಟಿರುವುದು ನಿಜವೇ: | ರಾಜ್ಯದ 11 ಮಹಾನಗರ ಪಾಲಿಕೆ/ ನಗರಸಭೆಗಳಲ್ಲಿ ಈ ಕೆಳಕಂಡ ಲೆಕ್ಕಶೀರ್ಷಿಕೆಗಳಡಿಯಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳಲಾಗುತ್ತಿರುತ್ತದೆ.<br><br>1. ಕೇಂದ್ರ/ ರಾಜ್ಯ ಹಣಕಾಸು ಆಯೋಗ ಅನುದಾನ: ಸರ್ಕಾರದ ಆಯವ್ಯಯದಲ್ಲಿ ಪ್ರತಿ ಆರ್ಥಿಕ ವರ್ಷ ಕೇಂದ್ರ/ ರಾಜ್ಯ ಹಣಕಾಸು ಆಯೋಗದ ಅನುದಾನವನ್ನು ಹಂಚಿಕೆ ಮಾಡಲಾಗುತ್ತಿದ್ದು, ಅದರಂತೆ ಕ್ರಿಯಾ ಯೋಜನೆಯನ್ನು ತಯಾರಿಸಿ ಅಭಿವೃದ್ಧಿ ಕಾಮಗಾರಿಗಳನ್ನು ಹಂಚಿಕೆ ಮಾಡಲಾಗಿರುವ ಅನುದಾನಕ್ಕೆ ಸೀಮಿತಗೊಳಿಸಿ ಅನುಷ್ಠಾನಗೊಳಿಸಲಾಗುತ್ತಿರುತ್ತದೆ. ಆದುದರಿಂದ ಆರ್ಥಿಕ ಸಾಮರ್ಥ್ಯ ಮೀರಿದ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಂಡಿರುವುದಿಲ್ಲ.<br><br>2. ಸರ್ಕಾರದ ಆಯವ್ಯಯದ ಘೋಷಣೆಯಂತೆ ಮಹಾತ್ಮ ಗಾಂಧಿ ನಗರ ವಿಕಾಸ ಯೋಜನೆ (ಹಂತ-2.0) ಮತ್ತು ನಗರೋತ್ಥಾನ ಯೋಜನೆಗಳಿಗೆ ನಿಗದಿಪಡಿಸಿರುವ ಅನುದಾನಕ್ಕೆ ಕ್ರಿಯಾ ಯೋಜನೆಯನ್ನು ತಯಾರಿಸಿ ಸೀಮಿತಗೊಳಿಸಿರುವ ಅನುದಾನಕ್ಕೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿರುತ್ತದೆ. ಅದರಂತೆ ನಿಗದಿಪಡಿಸಿರುವ ಆರ್ಥಿಕ ಸಾಮರ್ಥ್ಯದ ವ್ಯಾಪ್ತಿಯೊಳಗೆ ಮಾತ್ರ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳಲಾಗುತ್ತದೆ.<br><br>3. ನಗರ ಸ್ಥಳೀಯ ಸಂಸ್ಥೆಗಳ ಸ್ವಂತ ಸಂಪನ್ಮೂಲದ ಅನುದಾನಕ್ಕೆ ಸಂಬಂಧಿಸಿದಂತೆ ಕರ್ನಾಟಕ ಪೌರಸಭೆಗಳ ಲೆಕ್ಕಪದ್ಧತಿ ಮತ್ತು ಬಜೆಟ್ ನಿಯಮಗಳು, 2006 ರಂತೆ ಸ್ಥಳೀಯ ಸಂಸ್ಥೆಯ ಆಯವ್ಯಯದಲ್ಲಿ ಕಾಯ್ದಿರಿಸುವ ಅನುದಾನಕ್ಕೆ ಆರ್ಥಿಕ ಸಾಮರ್ಥ್ಯಕ್ಕೆ ತಕ್ಕಂತೆ ಅವಶ್ಯಕವಿರುವ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗುತ್ತಿರುತ್ತದೆ. |

| | | |
|---|---|---|
| ಆ) | ಮೈಸೂರು ಮಹಾನಗರ ಪಾಲಿಕೆಯಲ್ಲಿ ಸುಮಾರು 942 ಕೋಟಿ ರೂ.ಗಳ ಹಣಕಾಸಿನ ಕೊರತೆ ಎದುರಿಸುತ್ತಿದ್ದು. ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಗಳು ಭಾರಿ ಹಣಕಾಸಿನ ಕೊರತೆಗೆ ಸಿಲುಕಿರುವ ಮಾಹಿತಿ ನಿಜವೇ: | **ಮೈಸೂರು ಮಹಾನಗರ ಪಾಲಿಕೆಯಲ್ಲಿ** ರೂ.942 ಕೋಟಿಗಳ ಹಣಕಾಸಿನ ಕೊರತೆ ಎದುರಿಸುತ್ತಿರುವುದಿಲ್ಲ. ಪ್ರಸ್ತುತ ಪಾಲಿಕೆಯಲ್ಲಿ ರೂ.142.41 ಕೋಟಿ (ಎಸ್.ಎಫ್.ಸಿ ವೇತನ ಅನುದಾನ – 30.34 ಕೋಟಿ, 15ನೇ ಹಣಕಾಸು ಯೋಜನೆ – 112.07 ಕೋಟಿ) ಗಳ ಕೊರತೆಯಿರುವ ಅನುದಾನವನ್ನು ಆರ್ಥಿಕ ಇಲಾಖೆಯ ಸೂಚನೆಯಂತೆ ಸ್ವಂತ ಸಂಪನ್ಮೂಲದಿಂದ ಭರಿಸಲು ಸೂಚಿಸಲಾಗಿರುತ್ತದೆ.<br><br>**ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯಲ್ಲಿ** ಪ್ರಸ್ತುತ ರೂ.249.69 ಕೋಟಿ (ಎಸ್.ಎಫ್.ಸಿ ವೇತನ ಅನುದಾನ 34.69 ಕೋಟಿ, ಸ್ವಂತ ಸಂಪನ್ಮೂಲ - 215.00 ಕೋಟಿ) ಗಳ ಅನುದಾನ ಕೊರತೆ ಇರುತ್ತದೆ ಎಂದು ಆಯುಕ್ತರು ವರದಿ ಸಲ್ಲಿಸಿರುತ್ತಾರೆ. ಎಸ್.ಎಫ್.ಸಿ ವೇತನ ಅನುದಾನದ ಕೊರತೆಯನ್ನು ಆರ್ಥಿಕ ಇಲಾಖೆಯ ಸೂಚನೆಯಂತೆ ಸ್ವಂತ ಸಂಪನ್ಮೂಲದಿಂದ ಭರಿಸಲು ಸೂಚಿಸಲಾಗಿರುತ್ತದೆ. |
| ಇ) | ಈ ಹಣಕಾಸಿನ ಕೊರತೆಯಿಂದಾಗಿ ಹಲವಾರು ಗುತ್ತಿಗೆದಾರರ ಕಾಮಗಾರಿಯ ಮೊತ್ತ ಪಾವತಿಸಲು ಸಾಧ್ಯವಾಗದೇ ಇರುವ ಕಾರಣ ಗುತ್ತಿಗೆದಾರರು ನ್ಯಾಯಾಲಯದ ಮೊರೆ ಹೋಗುತ್ತಿರುವುದು ನಿಜವೇ: | ಮೈಸೂರು ಹಾಗೂ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಗಳಲ್ಲಿ ಗುತ್ತಿಗೆದಾರರು ಕಾಮಗಾರಿಯ ಮೊತ್ತ ಪಾವತಿಸುವ ಸಂಬಂಧ ನ್ಯಾಯಾಲಯದ ಮೊರೆ ಹೋಗಿರುವುದಿಲ್ಲ. |
| ಈ) | ಆರ್ಥಿಕ ಸಾಮರ್ಥ್ಯ ಮೀರಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಅನುಮತಿ ನೀಡಲಾಗಿದೆಯೇ ಅಥವಾ ಮಹಾನಗರ ಪಾಲಿಕೆಯ ಅಧಿಕಾರಿಗಳು ಸ್ವಯಂ ನಿರ್ಣಯ ಕೈಗೊಂಡು ಈ ರೀತಿಯ ಆರ್ಥಿಕ ಒತ್ತಡಕ್ಕೆ ಒಳಗಾಗುತ್ತಿದ್ದಾರೆಯೇ? (ಮಾಹಿತಿ ನೀಡುವುದು) | ಕರ್ನಾಟಕ ಪೌರಸಭೆಗಳ ಲೆಕ್ಕಪದ್ಧತಿ ಮತ್ತು ಬಜೆಟ್ ನಿಯಮಗಳು, 2006ರಲ್ಲಿ ಪ್ರತಿ ಆರ್ಥಿಕ ವರ್ಷಕ್ಕೆ ತಯಾರಿಸುವಂತೆ ಸೂಚಿಸಲಾಗಿರುತ್ತದೆ ಹಾಗೂ ನಾಲ್ಕನೇ ರಾಜ್ಯ ಹಣಕಾಸು ಆಯೋಗದ ಶಿಫಾರಸ್ಸಿನಂತೆ FRBM ನಿಯಮಗಳನ್ನು ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ಅಳವಡಿಸಿಕೊಳ್ಳಲು ಕರಡು ನಿಯಮಗಳನ್ನು ತಯಾರಿಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಆರ್ಥಿಕ ಶಿಸ್ತಿನ ಕುರಿತು ಕಟ್ಟುನಿಟ್ಟಾಗಿ ಕ್ರಮವಹಿಸಲಾಗುವುದು.<br><br>ಪ್ರಸ್ತುತ ಸ್ವಂತ ಸಂಪನ್ಮೂಲ ಅನುದಾನಕ್ಕೆ ಸಂಬಂಧಿಸಿದಂತೆ ವಾರ್ಡಿನ ಸಾರ್ವಜನಿಕರ ಬೇಡಿಕೆಯ ಮೇರೆಗೆ, ಪಾಲಿಕೆಯ ಸದಸ್ಯರು ಪ್ರಸ್ತಾಪಿಸಿದ ಕಾಮಗಾರಿಗಳನ್ನು ಆಯವ್ಯಯದಲ್ಲಿ ಕಾಯ್ದಿರಿಸುವ ಅನುದಾನಕ್ಕೆ ಕೌನ್ಸಿಲ್ ಅನುಮೋದನೆ ಪಡೆದು ಅನುಷ್ಠಾನಗೊಳಿಸಲಾಗುತ್ತಿರುತ್ತದೆ. |

ಸಂಖ್ಯೆ:ನಅಇ 224 ಎಸ್‌ಎಫ್‌ಸಿ 2025

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು.